# ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

**ದಿನಾಂಕ: 11–04–2018**

**ಪ್ರಕಟಣೆಯ ಕೃಪೆಗಾಗಿ.............**

**ವಿಜಯಪುರ:** ಮನುಸ್ಮೃತಿ ಸಮಾಜದಿಂದ ಮಹಿಳೆಯರನ್ನು ಹೊರತರಬೇಕು ಅಂದಾಗ ಮಾತ್ರ ಸಮಾಜದಲ್ಲಿ ಹೆಣ್ಣಿಗೆ ಸಮಾನತೆ ಸಿಗುವುದು ಎಂದು ರಾಜ್ಯ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕ ಡಾ.ಡಿ.ಜಿ. ಸಾಗರ ಅಭಿಪ್ರಾಯಪಟ್ಟರು.

ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಪ.ಜಾ./ಪ.ಪಂ. ಘಟಕದ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ಮಹಿಳಾ ಕಾನೂನು, ಮಾನವ ಹಕ್ಕು, ಮಹಿಳಾ ದೌರ್ಜನ್ಯ ಮತ್ತು ಮಹಿಳಾ ಸಬಲೀಕರಣ ಕುರಿತ ಘನತೆಯ ಬದುಕು ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಹಿಂದೂ ಕೋಡ್ ಬಿಲ್ ತರುವ ಮೂಲಕ ಸ್ತ್ರೀಯರಿಗೆ ಸಮಾನ ಹಕ್ಕುಗಳನ್ನು ಕಾನೂನಿನ ಮೂಲಕ ನೀಡಿದ ಬಾಬಾಸಾಹೇಬ್ ಅಂಬೇಡ್ಕರ್ ಹಾಗೂ ಸ್ತ್ರೀ ಶಿಕ್ಷಣ ನೀಡಿದ ಮೊಟ್ಟ ಮೊದಲ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಅವರಂತಹ ಮಹಾನ್ ಚೇತನವನ್ನು ಮಹಿಳೆಯರು ಎಂದಿಗೂ ಮರೆಯಬಾರದು ಎಂದು ಅವರು ತಿಳಿಸಿದರು.

ಪುರುಷ ಪ್ರಧಾನ ಸಮಾಜದಲ್ಲಿ ಮಹಿಳೆಯು ತನ್ನಲ್ಲಿರುವ ಕೀಳರಿಮೆಯನ್ನು ಹಾಗೂ ದೌರ್ಬಲ್ಯಗಳನ್ನು ಮೀರಿ ನಿಂತಾಗ ಸಮಾನತೆ ಪಡೆಯಲು ಸಾಧ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂವಹನ ಸಮಾಲೋಚಕಿ ಸತ್ಯಾ ಎಸ್. ಮಾತನಾಡಿ, ಶರಣರ ನಾಡಾದ ಈ ಭಾಗದಲ್ಲಿ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ನಿರ್ಮಾಣಗೊಂಡು ಮಹಿಳೆಯರಿಗೆ ಘನತೆಯ ಬದುಕನ್ನು ಕಟ್ಟಿಕೊಳ್ಳಲು ಈ ಕಾರ್ಯಕ್ರಮದ ಮೂಲಕ ಅವಕಾಶ ನೀಡಿದೆ ಎಂದರು.

ಹೆಣ್ಣು ಮತ್ತು ಗಂಡು ಅನ್ನುವಂತದ್ದು ಒಂದು ಭಾವ ಮಾತ್ರ. ದೇಹಕ್ಕೆ ಒಂದು ಚಹರೆ ನೀಡಿ ಹೆಣ್ಣ–ಗಂಡು ಎನ್ನುತ್ತೇವೆ. ಆದರೆ ಈ ಎಲ್ಲ ಭೇದ ಭಾವ ಮರೆತು ನಾವೆಲ್ಲರೂ ಒಂದಾಗಬೇಕು ಎಂದು ಅವರು ಹೇಳಿದರು.

ಎಲ್ಲ ದಾರ್ಶನಿಕರು ಹೇಳಿರುವುದು ಒಂದೇ ಮಾತನ್ನು. ಆದರೆ ಅವರ ಮಾತುಗಳನ್ನು ನಾವು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುತ್ತಿಲ್ಲ. ಪ್ರತಿಯೊಬ್ಬ ವ್ಯಕ್ತಿಯ ಬದುಕಿನ ಘನತೆಯನ್ನು ಬೆಳೆಸಿದಾಗ ಮಾತ್ರ ಇಡೀ ಜಗತ್ತಿಗೆ ಘನತೆಯನ್ನು ತಂದುಕೊಡಲು ಸಾಧ್ಯ ಎಂದು ತಿಳಿಸಿದರು.

ನಾವು ವಿಜ್ಞಾನ, ಗಣಿತ ಸೇರಿದಂತೆ ಎಲ್ಲ ವಿಷಯಗಳನ್ನು ಕಲಿಯಬಹುದು. ಆದರೆ ಆ ವಿಷಯಗಳು ವ್ಯಕ್ತಿಯ ಬದುಕನ್ನು ಘನತೆಯಿಂದ ಕಟ್ಟಿಕೊಳ್ಳಲು ಸಹಕಾರಿಯಾಗದಿದ್ದರೆ ನಾವು ಪಡೆಯುವ ಪದವಿಗಳು ವಿಫಲವಾಗುತ್ತವೆ ಎಂದು ಅವರು ಸ್ಪಷ್ಟಪಡಿಸಿದರು.

ಆಧುನಿಕ ಕಾಲದಲ್ಲಿಯೂ ಸಹ ಹೆಣ್ಣನ್ನು ಎಷ್ಟು ಸಾಧ್ಯವೋ ಅಷ್ಟು ಬಂಧಿಸುವ ಕುತಂತ್ರ ನಡೆಯುತ್ತಿದೆ. ಇದನ್ನು ಪ್ರಶ್ನಿಸುವ ಮತ್ತು ಪ್ರತಿರೋಧಿಸುವ ಮನೋಭಾವನೆಯ ಬೀಜವನ್ನು ಈ ಘನತೆಯ ಬದುಕು ಕಾರ್ಯಕ್ರಮವು ಈ ವಿದ್ಯಾರ್ಥಿನಿಯರಲ್ಲಿ ಬಿತ್ತಿದೆ ಎಂದು ಆಶಯ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ದಕ್ಷಿಣ ಕನ್ನಡದ ಹಿತಾ ರಿಸೋರ್ಸ್ ಯುನಿಟ್‌ನ ನಿರ್ದೇಶಕಿ ವಾಣಿ ಪೆರಿಯೋಡಿ ಮಾತನಾಡಿ, ಈ ತರಬೇತಿ ಯಾರೋ ಕಟ್ಟಿಕೊಟ್ಟ ಬುತ್ತಿಯನ್ನು ವರ್ಗಾಯಿಸುವ ಸಾಂಪ್ರದಾಯಿಕ ಕೆಲಸವಲ್ಲ. ಇಲ್ಲಿ ಜ್ಞಾನವು ಹುಟ್ಟು ಮತ್ತು ಮರುಹುಟ್ಟನ್ನು ಪಡೆಯುತ್ತದೆ. ಪುರುಷರಾಗಿ ಹುಟ್ಟಿ ಚೌಕಟ್ಟಿನಲ್ಲಿ ಬದುಕುತ್ತಿರುವವರು ಎಷ್ಟೋ ಸಂಗತಿಗಳನ್ನು ಕಳೆದುಕೊಳ್ಳಿತ್ತಿದ್ದೀರಾ ಎಂದು ತಿಳಿಸುವ ಒಂದು ವೇದಿಕೆ ಇದು ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಹೇಳಿಕೊಟ್ಟಿದ್ದೆಲ್ಲವೂ ಪುಸ್ತಕದ ಜ್ಞಾನವಲ್ಲ, ಅನುಭವದ ಜ್ಞಾನವದು. ಇದನ್ನು ಪಡೆಯಲು ವಿದ್ಯಾರ್ಥಿನಿಯರು ಸಹಕಾರ ನೀಡಿರುವುದು ಸಂತಸದ ಸಂಗತಿ ಎಂದು ಹೇಳಿದ ಅವರು, ಜೀವನದಲ್ಲಿ ಪರಸ್ಪರ ಅರ್ಥಮಾಡಿಕೊಂಡು, ಸಮಸ್ಯೆಗಳನ್ನು ಎದುರಿಸಿ, ಪರಿಸ್ಥಿತಿಗಳನ್ನು ನಿಭಾಯಿಸುವ ಶಕ್ತಿಯನ್ನು ಪಡೆಯಬೇಕು. ಅಧಿಕಾರವನ್ನು ಅಹಂಕಾರದ ಕೈಗೆ ಕೊಡದೆ ನಿಷ್ಪಕ್ಷಪಾತವಾಗಿ ಕೆಲಸ ಮಾಡಿ ಎಂದು ವಿದ್ಯಾರ್ಥಿನಿಯರಿಗೆ ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಮಹಿಳಾ ವಿವಿ ಕುಲಪತಿ ಪ್ರೊ.ಸಬಿಹಾ ಮಾತನಾಡಿ, ಘನತೆಯ ಬದುಕನ್ನು ಎಲ್ಲ ವಿದ್ಯಾರ್ಥಿನಿಯರು ಕಟ್ಟಿಕೊಳ್ಳಬೇಕೆಂದು ಸಲಹೆ ನೀಡಿದರು.

ಸ್ತ್ರೀ ವಾದಿಗಳು ಎಂದರೆ ಸಮಾಜದಲ್ಲಿ ನೆಮ್ಮದಿಯನ್ನು ಹಾಳು ಮಾಡುವವರು ಎಂಬ ಅಪಕಲ್ಪನೆ ಇದೆ. ಆದರೆ ಸ್ತ್ರೀ ಮನಸ್ಸುಗಳಿರುವ ಸ್ತ್ರೀವಾದಿಗಳು ಸಮಸಮಾಜವನ್ನು ಕಟ್ಟಲು ಸಿದ್ಧರಾದವರು ಎಂಬುವುದನ್ನು ತಿಳಿಯಬೇಕಿದೆ ಮತ್ತು ತಿಳಿಸಬೇಕಿದೆ ಎಂದರು.

ಈ ಸಂದರ್ಭದಲ್ಲಿ ಕುಲಸಚಿವ ಪ್ರೊ.ಎಲ್.ಆರ್.ನಾಯಕ ವೇದಿಕೆ ಮೇಲೆ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಈ ವರ್ಷ ಪಿಎಚ್‌ಡಿ ಪ್ರವೇಶಾತಿ ಪಡೆದುಕೊಂಡಿರುವ ಪ.ಜಾ./ಪ.ಪಂ. ವಿದ್ಯಾರ್ಥಿನಿಯರಿಗೆ ಪ.ಜಾ./ಪ.ಪಂ. ಘಟಕದ ವತಿಯಿಂದ ಲ್ಯಾಪ್‌ಟಾಪ್ ಮತ್ತು ಪ್ರಮಾಣ ಪತ್ರವನ್ನು ವಿತರಿಸಲಾಯಿತು. ಹಾಗೂ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವಿದ್ಯಾರ್ಥಿನಿಯರು ಹೊರತಂದ ಮಹಿಳಾ ಧ್ವನಿ ವಿಶೇಷ ಸಂಚಿಕೆಯನ್ನು ಬಿಡುಗಡೆ ಮಾಡಲಾಯಿತು.

ಪ್ರಾರಂಭದಲ್ಲಿ ಸಾವಿತ್ರಿಬಾಯಿ ಪುಲೆ ಮತ್ತು ಜ್ಯೋತಿರಾವ್ ಪುಲೆ ಅವರ ಜೀವನ ಚರಿತ್ರೆ ಕುರಿತಾದ ಸಾಕ್ಷ್ಯಚಿತ್ರವನ್ನು ಪ್ರದರ್ಶಿಸಿದರು. ವಿದ್ಯಾರ್ಥಿನಿಯರು ತರಬೇತಿಯ ಕುರಿತು ಅನಿಸಿಕೆಗಳನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಹಿತಾ ಸಂಸ್ಥೆಯ ಸದಸ್ಯರು, ನಗರದ ದಲಿತ ಸಂಘರ್ಷ ಸಮಿತಿಯ ಪದಾಧಿಕಾರಿಗಳು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು, ಸಂಶೋಧನಾ ಮತ್ತು ಸ್ನಾತಕೋತ್ತರ ವಿದ್ಯಾರ್ಥಿನಿಯರು ಹಾಗೂ ಮತ್ತಿತರರು ಭಾಗವಹಿಸಿದ್ದರು.

ಸಂಗೀತ ವಿಭಾಗದ ವಿದ್ಯಾರ್ಥಿನಿಯರು ಮಹಿಳಾ ಗೀತೆ ಹಾಡಿದರು. ಪ.ಜಾ./ಪ.ಪಂ. ಘಟಕದ ನಿರ್ದೇಶಕ ಡಾ.ಸಕ್ಪಾಲ್ ಹೂವಣ್ಣ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ.ವಿಷ್ಣು ಶಿಂಧೆ, ಡಾ. ಕಲಾವತಿ ಕಾಂಬಳೆ, ಗೀತಾ ಎಚ್. ಪರಿಚಯಿಸಿದರು. ಕಾರ್ಯಕ್ರಮ ಸಂಯೋಜಕಿ ಡಾ.ಸುರೇಖಾ ರಾಠೋಡ ನಿರೂಪಿಸಿದರು. ಕಾರ್ಯಕ್ರಮ ಸಂಯೋಜಕಿ ಡಾ. ಭಾಗ್ಯಶ್ರೀ ದೊಡಮನಿ ವಂದಿಸಿದರು.

## ಫೋಟೋ ಕ್ಯಾಪ್ಷನ್:

1) **ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಪ.ಜಾ./ಪ.ಪಂ. ಘಟಕದ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ಮಹಿಳಾ ಕಾನೂನು, ಮಾನವ ಹಕ್ಕು, ಮಹಿಳಾ ದೌರ್ಜನ್ಯ ಮತ್ತು ಮಹಿಳಾ ಸಬಲೀಕರಣ ಕುರಿತ ಘನತೆಯ ಬದುಕು ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳು ಜ್ಯೋತಿಬಾ ಫುಲೆ ಅವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿದರು.**

2) **ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಪ.ಜಾ./ಪ.ಪಂ. ಘಟಕದ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ಮಹಿಳಾ ಕಾನೂನು, ಮಾನವ ಹಕ್ಕು, ಮಹಿಳಾ ದೌರ್ಜನ್ಯ ಮತ್ತು ಮಹಿಳಾ ಸಬಲೀಕರಣ ಕುರಿತ ಘನತೆಯ ಬದುಕು ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ರಾಜ್ಯ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕ ಡಾ.ಡಿ.ಜಿ. ಸಾಗರ ಮಾತನಾಡಿದರು.**

3) ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಪ.ಜಾ./ಪ.ಪಂ. ಘಟಕದ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ಮಹಿಳಾ ಕಾನೂನು, ಮಾನವ ಹಕ್ಕು, ಮಹಿಳಾ ದೌರ್ಜನ್ಯ ಮತ್ತು ಮಹಿಳಾ ಸಬಲೀಕರಣ ಕುರಿತ ಘನತೆಯ ಬದುಕು ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಇನ್ನೋರ್ವ ಅತಿಥಿಯಾದ ಸಂವಹನ ಸಮಾಲೋಚಕಿ ಸತ್ಯಾ ಎಸ್. ಮಾತನಾಡಿದರು.

4) ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಪ.ಜಾ./ಪ.ಪಂ. ಘಟಕದ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ಮಹಿಳಾ ಕಾನೂನು, ಮಾನವ ಹಕ್ಕು, ಮಹಿಳಾ ದೌರ್ಜನ್ಯ ಮತ್ತು ಮಹಿಳಾ ಸಬಲೀಕರಣ ಕುರಿತ ಘನತೆಯ ಬದುಕು ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಮತ್ತೋರ್ವ ಅತಿಥಿಯಾದ ದಕ್ಷಿಣ ಕನ್ನಡದ ಹಿತಾ ರಿಸೋರ್ಸ ಯುನಿಟ್‌ನ ನಿರ್ದೇಶಕಿ ವಾಣಿ ಪೆರಿಯೋಡಿ ಮಾತನಾಡಿದರು.

5) ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಪ.ಜಾ./ಪ.ಪಂ. ಘಟಕದ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ಮಹಿಳಾ ಕಾನೂನು, ಮಾನವ ಹಕ್ಕು, ಮಹಿಳಾ ದೌರ್ಜನ್ಯ ಮತ್ತು ಮಹಿಳಾ ಸಬಲೀಕರಣ ಕುರಿತ ಘನತೆಯ ಬದುಕು ಕಾರ್ಯಕ್ರಮದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ವಿವಿ ಕುಲಪತಿ ಪ್ರೊ.ಸಬಿಹಾ ಮಾತನಾಡಿದರು.

6) ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಪ.ಜಾ./ಪ.ಪಂ. ಘಟಕದ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ಮಹಿಳಾ ಕಾನೂನು, ಮಾನವ ಹಕ್ಕು, ಮಹಿಳಾ ದೌರ್ಜನ್ಯ ಮತ್ತು ಮಹಿಳಾ ಸಬಲೀಕರಣ ಕುರಿತ ಘನತೆಯ ಬದುಕು ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಈ ವರ್ಷ ಪಿಎಚ್‌ಡಿ ಪ್ರವೇಶಾತಿ ಪಡೆದುಕೊಂಡಿರುವ ಪ.ಜಾ./ಪ.ಪಂ. ವಿದ್ಯಾರ್ಥಿನಿಯರಿಗೆ ಪ.ಜಾ./ಪ.ಪಂ. ಘಟಕದ ವತಿಯಿಂದ ಲ್ಯಾಪ್‌ಟಾಪ್ ಮತ್ತು ಪ್ರಮಾಣ ಪತ್ರವನ್ನು ವಿತರಿಸಲಾಯಿತು.

7) ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಪ.ಜಾ./ಪ.ಪಂ. ಘಟಕದ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ಮಹಿಳಾ ಕಾನೂನು, ಮಾನವ ಹಕ್ಕು, ಮಹಿಳಾ ದೌರ್ಜನ್ಯ ಮತ್ತು ಮಹಿಳಾ ಸಬಲೀಕರಣ ಕುರಿತ ಘನತೆಯ ಬದುಕು ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವಿದ್ಯಾರ್ಥಿನಿಯರು ಹೊರತಂದ ಮಹಿಳಾ ಧ್ವನಿ ವಿಶೇಷ ಸಂಚಿಕೆಯನ್ನು ಬಿಡುಗಡೆ ಮಾಡಲಾಯಿತು.




ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ
"ಘನತೆಯ ಬದುಕು"
ಸಮಾರೋಪ ಸಮಾರಂಭ
11-04-2018